ಕೇಸರಿ ಕಾರ್ಡು ಮತ್ತು ತ್ರಿವರ್ಣ ಕಾರ್ಡು ವಿತರಣೆ

694 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಎಲ್ಲ ಅರ್ಹ ಫಲಾನುಭವಿಗಳಿಗೆ ಕೇಸರಿ ಕಾರ್ಡು ಹಾಗೂ ತ್ರಿವರ್ಣ ಕಾರ್ಡು ವಿತರಣೆಯಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಕಳೆದ ಅಧಿವೇಶನದಲ್ಲಿ ಈ ಬಗ್ಗೆ ನೀಡಿದ ಭರವಸೆ ಈಡೇರಿಸಲು ಇರುವ ತೊಂದರೆಗಳೇನು?

ಇ) ಇನ್ನು ಎಷ್ಟು ಅವಧಿಯಲ್ಲಿ ಎಲ್ಲ ಅರ್ಹ ಫಲಾನುಭವಿಗಳಿಗೆ ತ್ರಿವರ್ಣ ಕಾರ್ಡು ಕೇಸರಿ ಕಾರ್ಡು ವಿತರಣೆ ಮಾಡಲಾಗುವುದು?

ಶ್ರೀ ಎಸ್. ನಂಜಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) ರಾಜ್ಯದ ಎಲ್ಲ ಅರ್ಹ ಫಲಾನುಭವಿಗಳಿಗೂ ಕೇಸರಿ ಹಾಗೂ ತ್ರಿವರ್ಣ ಹಸಿರು ಕಾರ್ಡ್‌ನ್ನು ವಿತರಿಸಲು ಎಲ್ಲಾ ಎಚ್ಚರಿಕೆ ಕ್ರಮವನ್ನು ವಹಿಸಲಾಗಿದೆ.

ಆ) ಅನ್ವಯಿಸುವುದಿಲ್ಲ.

ಇ) ದಿನಾಂಕ 31-3-96ರ ಅಂತ್ಯಕ್ಕೆ ಹಸಿರು ಕೇಸರಿ ಪಡಿತರ ಚೀಟಿಗಳನ್ನು ಕೋರಿ ರಾಜ್ಯಾದ್ಯಂತ ಎಲ್ಲಾ ಪಡಿತರ ಚೀಟಿ ಅರ್ಜಿಗಳನ್ನು ಪರಿಶೀಲಿಸಿ ಪಡಿತರ ಚೀಟಿ ವಿತರಿಸಲು ಕ್ರಮ ವಹಿಸಲಾಗುವುದು.

ವಿದ್ಯುತ್ ಪೂರೈಸುವ ವ್ಯವಸ್ಥೆ ಕುರಿತು

696 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗದಗ-ಬೆಟಗೇರಿ ಅವಳಿನಗರಕ್ಕೆ ನೀರು ಪೂರೈಸುವ ಯೋಜನೆಗೆ ಪ್ರತಿನಿತ್ಯ ಎಷ್ಟು ಗಂಟೆಗಳ ಕಾಲ ಗುಣಮಟ್ಟದ ವಿದ್ಯುತ್ ಪೂರೈಸುವ ವ್ಯವಸ್ಥೆ ಮಾಡಲಾಗಿದೆ.

ಆ) ಗದಗ ಬೆಟಗೇರಿ ಕುಡಿಯುವ ನೀರು ಪೂರೈಕೆಯ ಯೋಜನೆಗೆ ನಿತ್ಯ ಕನಿಷ್ಟ 18 ಗಂಟೆಗಳ ಕಾಲ ಗುಣಮಟ್ಟದ ವಿದ್ಯುತ್ ಪೂರೈಸಲು ಇರುವ ತೊಂದರೆಗಳೇನು?

ಇ) ಈ ಕುಡಿಯುವ ನೀರು ಪೂರೈಕೆಯ ಯೋಜನೆಗೆ ವಿದ್ಯುತ್ ಪೂರೈಕೆಯಲ್ಲಿರುವ ತೊಂದರೆ ನಿವಾರಿಸಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ?

ಶ್ರೀ ಹೆಚ್.ಕೆ. ಪಾಟೀಲ್ (ಉಪಮುಖ್ಯ ಮಂತ್ರಿಗಳು) :

ಅ) ಪ್ರಸ್ತುತ ಈ ನೀರು ಪೂರೈಸುವ ಯೋಜನೆಗೆ ಪ್ರತಿನಿತ್ಯ 20 ಗಂಟೆಗಳ ಕಾಲ ಸಾಕಷ್ಟು ಒಳ್ಳೆಯ ಗುಣಮಟ್ಟದಲ್ಲಿ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ.

ಆ) ಪ್ರಶ್ನೆಯ 'ಅ' ಭಾಗಕ್ಕೆ ನೀಡಿರುವ ಉತ್ತರದಿಂದ ಇದು ಉದ್ಭವಿಸುವುದಿಲ್ಲ.

ಇ) 22-1-96ರವರೆಗೆ ಈ ಕುಡಿಯುವ ನೀರು ಪೂರೈಸಿ ಯೋಜನೆಗೆ ಮಹರಾಷ್ಟ್ರ ಗ್ರಿಡ್‌ನಿಂದ ರಾತ್ರಿ ವೇಳೆಯಲ್ಲಿ ವಿದ್ಯುತ್ ಸರಬರಾಜು ಮಾಡಲಾಗುತ್ತಿತ್ತು. ಈ ಕಾರಣದಿಂದಾಗಿ ಕಡಿಮೆ ವೋಲ್ಟೇಜ್ ಪರಿಸ್ಥಿತಿ ಉಂಟಾದ 22-1-96ರ ನಂತರದಿಂದ ಈ ಕುಡಿಯುವ ನೀರಿನ ಯೋಜನೆಗೆ ಕರ್ನಾಟಕದ ಗ್ರಿಡ್‌ನಿಂದಲೇ ವಿದ್ಯುತ್ ಸರಬರಾಜು ಮಾಡುತ್ತಿರುವುದರಿಂದ ಈಗ ಕಡಿಮೆ ವೋಲ್ಟೇಜ್ ಪರಿಸ್ಥಿತಿಯನ್ನು ನಿವಾರಿಸಲಾಗಿದೆ.